## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಜಿ.ಜೆ ಪರಶುರಾಮಪ್ಪ, ಹಿಂದಿನ ಅಧ್ಯಕ್ಷರು, ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ಪ್ರಕರಣ 48(4) ಮತ್ತು 43(ಎ) ರನ್ವಯ ಕ್ರಮ ಜರುಗಿಸುವ ಬಗ್ಗೆ.

**ಓದಲಾಗಿದೆ:**
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಪಂದಾ: ಆ(2)ಗ್ರಾಪಂ: ಸಿಆರ್: 109: 2016–17, ದಿನಾಂಕ:16.01.2017.
2. ಇದೇ ಸಮ ಸಂಖ್ಯೆಯ ಸರ್ಕಾರದ ಆದೇಶ, ದಿನಾಂಕ:19.02.2018.
3. ಮಾನ್ಯ ಕರ್ನಾಟಕ ಉಚ್ಛ ನ್ಯಾಯಾಲಯ, ಬೆಂಗಳೂರು ರಿಟ್ ಅರ್ಜಿ ಸಂಖ್ಯೆ:11524/208 ರ ಪ್ರಕರಣದಲ್ಲಿ ನೀಡಿದ ತೀರ್ಪು, ದಿನಾಂಕ:11.06.2018.
4. ಶ್ರೀ ಜಿ.ಜೆ ಪರಶುರಾಮಪ್ಪ, ಅಧ್ಯಕ್ಷರು, ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ರವರು ಮಾನ್ಯ ನ್ಯಾಯಾಲಯದ ಆದೇಶದನ್ವಯ ಸರ್ಕಾರದಲ್ಲಿ ಅರ್ಜಿ ಸಲ್ಲಿಸಿದ ದಿನಾಂಕ:05.07.2018.

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ(1) ರಲ್ಲಿ ಶ್ರೀ ಬಿ.ಜೆ ಪರಶುರಾಮಪ್ಪ, ಅಧ್ಯಕ್ಷರು ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಬಿಳುಚೋಡು ಗ್ರಾಮ ಪಂಚಾಯಿತಿಯಲ್ಲಿ ಅಭಿವೃದ್ಧಿ ಕಾಮಗಾರಿಗಳ ಹೆಸರಿನಲ್ಲಿ 2015–16 ಮತ್ತು 2016–17 ನೇ ಸಾಲಿನ ವಿವಿಧ ಯೋಜನೆಯ ಮಾರ್ಗಸೂಚಿಗಳನ್ವಯ ಕಾಮಗಾರಿಗಳನ್ನು ಅನುಷ್ಠಾನಗೊಳಿಸದೇ ಸರ್ಕಾರದ ಹಣ ದುರುಪಯೋಗಕ್ಕೆ ಕಾರಣರಾಗಿದ್ದಾರೆಂದು ಸದರಿಯವರ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅದಿನಿಯಮ 1993ರ ಪ್ರಕರಣ 43(ಎ) ಮತ್ತು 48(4) ರಡಿ ಕ್ರಮ ಜರುಗಿಸಲು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಜಿಲ್ಲೆ ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕ್ರಮಾಂಕ (2)ರ ಆದೇಶದಲ್ಲಿ ಶ್ರೀ ಜಿ.ಜೆ ಪರಶುರಾಮಪ್ಪ, ಅಧ್ಯಕ್ಷರು, ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರ ಮೇಲಿನ ಆಪಾದನೆಗಳು ಸಾಬೀತಾಗಿರುವುದರಿಂದ ಇವರಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ರ ಪ್ರಕರಣ 43(ಎ) ಮತ್ತು 48(4) ರಂತೆ ಬಿಳಿಚೋಡು ಗ್ರಾಮ ಪಂಚಾಯಿತಿ ಅಧ್ಯಕ್ಷ ಸ್ಥಾನದಿಂದ ವಜಾಗೊಳಿಸಿ ಪಂಚಾಯಿತಿ ಸದಸ್ಯತ್ವವನ್ನು ರದ್ದುಪಡಿಸಿ ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮಾಂಕ(3)ರಲ್ಲಿ ಸರ್ಕಾರದ ಆದೇಶ ಸಂಖ್ಯೆ:ಗ್ರಾಪಂಅ 384 ಗ್ರಾಪಂಅ 2017, ದಿನಾಂಕ:11.06.2018 ಅನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 11524/208 ಅನ್ನು ದಾಖಲಿಸಿದ್ದು, ಈ ಪ್ರಕರಣದ ಬಗ್ಗೆ ಮಾನ್ಯ ನ್ಯಾಯಾಲಯವು ದಿನಾಂಕ:16.03.2020 ರಂದು ತೀರ್ಪು ನೀಡಿ ಪ್ರಕರಣವನ್ನು ವಿಲೇಗೊಳಿಸಿರುತ್ತದೆ. ಅದರ ಉದ್ಧೃತ ಭಾಗ ಈ ಕೆಳಕಂಡಂತಿರುತ್ತದೆ.

> In view of the aforesaid reasons and in the interest of justice, the impugned order passed by the 1st respondent – State Government dated 19.02.2016 is here by quashed and the matter is remanded to the 1st respondent only in so far as providing an opportunity to the petitioner to produce relevant documents to prove that he was not involved in misappropriation. If such documents are produced by the petitioner, the 1st respondent – State Government shall consider the same and pass orders in accordance with law.
>
> However, it is made clear that mere remanding the matter for reconsideration afresh will not come in the way of the State Government to proceed with the election proposed to the post of Adyaksha of the Bilichodu Grama Panchayath in accordance with law and the petitioner shall not claim any equity later in respect of the post of the Adyaksha – President of the 4th respondent – Grama Panchayath even if he succeeds before the 1st respondent.

...2

The petitioner is directed to appear before the 1st respondent on 05.07.2018 and the 1st respondent shall permit the petitioner to produce the relevant records on that day and proceed in accordance with law.

Writ petition is disposed of accordingly.

ಮಾನ್ಯ ನ್ಯಾಯಾಲಯದ ಆದೇಶದನ್ವಯ ನಿಯಮಾನುಸಾರ ಕ್ರಮ ವಹಿಸಲು ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ವಿಚಾರಣೆಯನ್ನು ದಿನಾಂಕ:06.07.2019, 04.09.2019, 15.10.2019, 06.11.2019 ರಂದು ಜರುಗಿಸಿ ಸದರಿಯವರ ಮೇಲಿನ ಆಪಾದನೆಗಳು ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್, ದಾವಣಗೆರೆ ಜಿಲ್ಲೆ ರವರು ತನಿಖೆ ನಡೆಸಿ ಸಲ್ಲಿಸಿರುವ ವರದಿಯಿಂದ ಸಾಬೀತಾಗಿರುವ ಹಿನ್ನೆಲೆಯಲ್ಲಿ ಶ್ರೀ ಜಿ.ಜೆ ಪರಶುರಾಮಪ್ಪ, ಹಿಂದಿನ ಅಧ್ಯಕ್ಷರು, ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರು ಗ್ರಾಮ ಪಂಚಾಯಿತಿಯ ಪ್ರಸ್ತುತ ಸದಸ್ಯರಲ್ಲದಿರುವುದರಿಂದ ಇವರಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)(vi) ರಡಿ ಮತ್ತು ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ ಆರು ವರ್ಷಗಳ ವರೆಗೆ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/384/ಗ್ರಾಪಂಅ/2017, ಬೆಂಗಳೂರು, ದಿನಾಂಕ:31.12.2021.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಜಿ.ಜೆ ಪರಶುರಾಮಪ್ಪ, ಹಿಂದಿನ ಅಧ್ಯಕ್ಷರು, ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ ಇವರುಗಳ ಮೇಲಿನ ಆಪಾದನೆಗಳು ಸಾಬೀತಾಗಿರುವುದರಿಂದ ಹಾಗೂ ಗ್ರಾಮ ಪಂಚಾಯಿತಿಯ ಪ್ರಸ್ತುತ ಸದಸ್ಯರಲ್ಲದಿರುವುದರಿಂದ ಇವರಿಗೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ)(vi) ರಡಿ ಮತ್ತು ಸದರಿ ಅಧಿನಿಯಮದ ಪ್ರಕರಣ 12(ಎಲ್) ರನ್ವಯ ಈ ಆದೇಶ ಹೊರಡಿಸಿದ ದಿನಾಂಕದಿಂದ ಮುಂದಿನ ಆರು ವರ್ಷಗಳ ವರೆಗೆ ಚುನಾವಣೆಗೆ ನಿಲ್ಲದಂತೆ ಅನರ್ಹಗೊಳಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
Chetna 31/12/21
(ಚೇತನ.ಎಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1. ಕಾರ್ಯದರ್ಶಿ, ರಾಜ್ಯ ಚುನಾವಣಾ ಆಯೋಗ, ಕನ್ನಿಂಗ್ ಹ್ಯಾಂ ರಸ್ತೆ, ಬೆಂಗಳೂರು.
2. ಆಯುಕ್ತರು, ಪಂಚಾಯತ್ ರಾಜ್ ಆಯುಕ್ತಾಲಯ, ಕೆ.ಜಿ ರಸ್ತೆ, ಕಾಳಿದಾಸ ಮಾರ್ಗ, ಬೆಂಗಳೂರು-560009.
3. ಜಿಲ್ಲಾಧಿಕಾರಿ, ದಾವಣಗೆರೆ ಜಿಲ್ಲೆ.
4. ಮುಖ್ಯ ಕಾರ್ಯನಿರ್ವಾಹಣಾಧಿಕಾರಿ, ಜಿಲ್ಲಾ ಪಂಚಾಯಿತಿ, ದಾವಣಗೆರೆ ಜಿಲ್ಲೆ.
5. ಕಾರ್ಯನಿರ್ವಾಹಕ ಅಧಿಕಾರಿ, ಜಗಳೂರು ತಾಲ್ಲೂಕು ಪಂಚಾಯಿತಿ, ದಾವಣಗೆರೆ ಜಿಲ್ಲೆ.
6. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬಿಳಿಚೋಡು ಗ್ರಾಮ ಪಂಚಾಯಿತಿ, ದಾವಣಗೆರೆ ಜಿಲ್ಲೆ
7. ಸರ್ಕಾರಿ ವಕೀಲರು, ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.
8. ಶ್ರೀ ಜಿ.ಜೆ ಪರಶುರಾಮಪ್ಪ, ಹಿಂದಿನ ಅಧ್ಯಕ್ಷರು, ಬಿಳಿಚೋಡು ಗ್ರಾಮ ಪಂಚಾಯಿತಿ, ಜಗಳೂರು ತಾಲ್ಲೂಕು, ದಾವಣಗೆರೆ ಜಿಲ್ಲೆ.
9. ಗಣಕ ಕೋಶ-ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
10. ಕಛೇರಿ ಪ್ರತಿ/ಹೆಚ್ಚುವರಿ ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ನಿರ್ದೇಶಕರು(ಪಂ.ರಾಜ್-1) ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕರು.

*********